# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.486/2018

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| **ಹೆಸರು** | : ಜೆ. ರಮೇಶ್ | ಚಾಸಾಃ **25** ಫ್ರಾಸಾಃ **6** |
| **ತಂದೆಯ ಹೆಸರು** | : ಎಂ .ಜಯರಾಮಪ್ಪ | |
| **ವಯಸ್ಸು** | : 46 ವರ್ಷ | |
| **ವೃತ್ತಿ** | : ಪಿ ಐ | |
| **ವಾಸಸ್ಥಳ** | : ಬೆಂಗಳೂರು | |

ದಿನಾಂಕಃ **22-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ನಾನು ಡಿಸೆಂಬರ್ 2015 ರಿಂದ ಅಕ್ಟೋಬರ್ 2018 ರವರೆಗೆ ಹೊನ್ನಾಳಿ ವೃತ್ತದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿದ್ದೆನು.

ದಿಃ 26-03-2018 ರಂದು ಈ ಪ್ರಕರಣದ ಕಡತವನ್ನು ಚಾಸಾ-24 ರವರಿಂದ ಪಡೆದುಕೊಂಡು ಅಲ್ಲಿಯವರೆಗೂ ಆದ ತನಿಖೆಯನ್ನು ಪರಿಶೀಲಿಸಿ ತನಿಖೆಯನ್ನು ಮುಂದುವರೆಸಿ, ಅದೇ ದಿನ ಚಾಸಾ-19 ರವರಿಂದ ಮೃತನ ಪಿ ಎಂ ವರದಿಯನ್ನು ಸ್ವೀಕರಿಸಿ, ಚಾಸಾ-18 ರವರಿಂದ ಐ ಎಂ ವಿ ವರದಿಯನ್ನು ಸ್ವೀಕರಿಸಿರುತ್ತೇನೆ.

ದಿಃ 14-05-2018 ರಂದು ಚಾಸಾ-12 ರವರ ಮರುಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿಃ 08-06-2018 ರಂದು ಚಾಸಾ-20 ರವರಿಂದ ಚಾಸಾ-12 ರವರ

ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ.

ದಿಃ 15-06-2018 ರಂದು ಆರೋಪಿತರ ವಿರುದ್ಧ ಆರೋಪ ಸಾಭೀತಾಗಿದ್ದರಿಂದ, ದೋಷರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಪಿ ಎಂ ವರದಿಯನ್ನು ನಿಪಿ-15 ಎಂದು, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು, ಚಾಸಾ-12 ರವರ ಗಾಯದ ಪ್ರಮಾಣ ಪತ್ರವನ್ನು ನಿಪಿ-16 ಎಂದು, ಸಾಕ್ಷಿಯ ಸಹಿಯನ್ನು ನಿಪಿ-16(ಎ) ಎಂದು, ಐ ಎಂ ವಿ ವರದಿಯನ್ನು ನಿಪಿ-17 ಎಂದು, ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು. ಆರೋಪಿ ಗೈರು ಹಾಜರಾಗಿದ್ದು ಆತನನ್ನು ಗುರುತಿಸುವ ಬಗ್ಗೆ ಆತನ ಪರ ವಕೀಲರು ಯಾವುದೇ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

<u>ಪಾಟೀ ಸವಾಲು:- ಆರೋಪಿ ಪರ ವಕೀಲರರಿಂದ:-</u>

ಚಾಸಾ-19 ರವರಿಂದ ಮೃತನ ಪಿ ಎಂ ವರದಿಯನ್ನು ಸ್ವೀಕರಿಸಿಲ್ಲ ಮತ್ತು ಚಾಸಾ-18 ರವರಿಂದ ಐ ಎಂ ವಿ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಚಾಸಾ-12 ರವರ ಮರುಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-20 ರವರಿಂದ ಚಾಸಾ-12 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ತನಿಖೆಯನ್ನು ನಡೆಸಿ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.